# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 939

ಸದಸ್ಯರ ಹೆಸರು : ಶ್ರೀಮತಿ ಉಮಾಶ್ರೀ

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 13-12-2023

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಸರ್ಕಾರ ಮಹಿಳೆಯರಿಗೆ ಬಸ್ಸಿನಲ್ಲಿ ಉಚಿತ ಪ್ರಯಾಣ ಶಕ್ತಿ ಯೋಜನೆ ಜಾರಿಗೆ ಬರುವ ಮೊದಲು ದಿನಂಪ್ರತಿ ಎಷ್ಟು ಪ್ರಯಾಣಿಕರು ಪ್ರಯಾಣಿಸುತ್ತಿದ್ದರು ಹಾಗೂ ಈ ಯೋಜನೆಯ ನಂತರ ಎಷ್ಟು ಪ್ರಯಾಣಿಕರು ಪ್ರಯಾಣಿಸುತ್ತಿದ್ದಾರೆ; | ರಾಜ್ಯದ ನಾಲ್ಕು ಸಾರಿಗೆ ನಿಗಮಗಳಲ್ಲಿ ಶಕ್ತಿ ಯೋಜನೆ ಜಾರಿಗೆ ಬರುವ ಮೊದಲು ಹಾಗೂ ನಂತರ ದಿನಂಪ್ರತಿ ಸರಾಸರಿ ಪ್ರಯಾಣಿಸುತ್ತಿರುವ ಪ್ರಯಾಣಿಕರ ಸಂಖ್ಯೆ ಕೆಳಕಂಡಂತಿದೆ:- |

**(ಲಕ್ಷಗಳಲ್ಲಿ)**

| ನಿಗಮಗಳು | ಶಕ್ತಿ ಯೋಜನೆ ಜಾರಿಗೆ ಬರುವ ಮೊದಲು | ಶಕ್ತಿ ಯೋಜನೆ ಜಾರಿಗೆ ಬಂದ ನಂತರ |
|---|---|---|
| ಕ.ರಾ.ರ.ಸಾ.ನಿಗಮ | 29.72 | 33.27 |
| ಬೆಂ.ಮ.ಸಾ.ಸಂಸ್ಥೆ | 33.67 | 40.04 |
| ವಾ.ಕ.ರ.ಸಾ.ಸಂಸ್ಥೆ | 16.49 | 23.93 |
| ಕ.ಕ.ರ.ಸಾ.ನಿಗಮ | 12.28 | 17.16 |
| **ಒಟ್ಟು** | **92.16** | **114.4** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಆ. | ಪ್ರಯಾಣ ಮಾಡುವ ಪ್ರಯಾಣಿಕರ ಸಂಖ್ಯೆಗೆ ಅನುಗುಣವಾಗಿ ಹೆಚ್ಚು ಬಸ್ಸುಗಳನ್ನು ಒದಗಿಸಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಹೆಚ್ಚುವರಿ ಬಸ್ಸುಗಳನ್ನು ಒದಗಿಸಲಾಗಿದೆ; | ಮಹಿಳೆಯರಿಗೆ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸಿರುವುದರಿಂದ ಸಾರಿಗೆ ಸಂಸ್ಥೆಗಳ ಬಸ್‌ಗಳಲ್ಲಿ ಸಂಚರಿಸುವವರ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದ್ದು, ಬೇಡಿಕೆಗೆ ಅನುಗುಣವಾಗಿ ಹೆಚ್ಚುವರಿ ಸರತಿಗಳನ್ನು ಅಳವಡಿಸಲು ಕ್ರಮವಹಿಸಲಾಗುತ್ತಿದೆ.<br><br>**<u>ಕ.ರಾ.ರ.ಸಾ.ನಿಗಮ:-</u>**<br><br>ಶಕ್ತಿ ಯೋಜನೆ ಜಾರಿಗೂ ಮೊದಲು 45255 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು.<br><br>ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ 46954 ಸರತಿಗಳನ್ನು ಮಾಡಲಾಗುತ್ತಿದೆ. ಪ್ರತಿದಿನ 1699 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆಯನ್ನು ಮಾಡಲಾಗುತ್ತಿದೆ.<br><br>2023-24ನೇ ಸಾಲಿನಲ್ಲಿ 300 ಹೊಸ ಅನುಸೂಚಿಗಳನ್ನು ಕಾರ್ಯಾಚರಿಸಲು ಯೋಜಿಸಲಾಗಿದ್ದು, ಅದರಲ್ಲಿ 137 ಹೊಸ ಅನುಸೂಚಿಗಳನ್ನು ಪ್ರಾರಂಭಿಸಲಾಗಿದೆ. |

**ಬೆಂ.ಮ.ಸಾ.ಸಂಸ್ಥೆ:-**

ಶಕ್ತಿ ಯೋಜನೆ ಜಾರಿಗೆ ಮೊದಲು ಮೇ-2023 ರ ಅಂತ್ಯಕ್ಕೆ ಸಂಸ್ಥೆಯಿಂದ ಪ್ರತಿದಿನ 5,555 ಅನುಸೂಚಿಗಳನ್ನು 56,646 ಸುತ್ತುವಳಿಗಳಲ್ಲಿ 11.22 ಲಕ್ಷ ಕಿ.ಮೀ.ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು.

ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ ದಿನಾಂಕ: 30.11.2023ರಂತೆ ಪ್ರತಿದಿನ 5,587 ಅನುಸೂಚಿಗಳನ್ನು 57,652 ಸುತ್ತುವಳಿಗಳೊಂದಿಗೆ 11.34 ಲಕ್ಷ ಕಿ.ಮೀ.ಗಳಲ್ಲಿ ಕಾರ್ಯಾಚರಣೆ ಮಾಡಲಾಗುತ್ತಿದ್ದು, ಪ್ರತಿದಿನ 1006 ಹೆಚ್ಚುವರಿ ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

2023-24ನೇ ಸಾಲಿನಲ್ಲಿ, ಹವಾನಿಯಂತ್ರಿತ ಸಾರಿಗೆಗಳನ್ನು ಒಳಗೊಂಡಂತೆ ಒಟ್ಟು 5923 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲು ಕ್ರಿಯಾ ಯೋಜನೆ ರೂಪಿಸಲಾಗಿದೆ.

**ವಾ.ಕ.ರ.ಸಾ.ಸಂಸ್ಥೆ:-**

ಪ್ರಯಾಣಿಕರ ಸಂಖ್ಯೆಗೆ ಅನುಗುಣವಾಗಿ ಸಂಸ್ಥೆಯಲ್ಲಿನ ಲಭ್ಯವಿರುವ ಸಂಪನ್ಮೂಲಗಳಿಂದ 28 ಅನುಸೂಚಿಗಳನ್ನು ಹೆಚ್ಚಿಸಲಾಗಿದೆ. ಅಲ್ಲದೇ ಜೂನ್-23ರ ನಂತರದ ಅವಧಿಯಲ್ಲಿ 124 ಅಂತರರಾಜ್ಯ ಸಾರಿಗೆಗಳನ್ನು ಸ್ಥಗಿತಗೊಳಿಸಿ, ಸದರಿ ವಾಹನಗಳನ್ನೂ ಸಹ ರಾಜ್ಯದೊಳಗೆ ಕಾರ್ಯಾಚರಣೆಗೆ ಬಳಸಿಕೊಂಡು ಒಟ್ಟಾರೆ 1114 ಸರತಿಗಳನ್ನು ಹೆಚ್ಚಿಸಿ ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಅನುಕೂಲವಾಗುವಂತೆ ವಾಹನಗಳ ಕಾರ್ಯಾಚರಣೆಗೆ ಕ್ರಮವಹಿಸಲಾಗಿದೆ.

**ಕ.ಕ.ರ.ಸಾ.ನಿಗಮ:-**

ಪ್ರಸಕ್ತ ಸಾಲಿನಲ್ಲಿ ಇದುವರೆಗೆ ನಿಗಮಕ್ಕೆ 612 ಮೊಫೀಸಿಲ್, 02 ಒಲ್ವೋ, 02 ಎ.ಸಿ.ಸ್ಲೀಪರ್ ಮತ್ತು 05 ನಾನ್-ಎ.ಸಿ.ಸ್ಲೀಪರ್ ವಾಹನಗಳು ಒಳಗೊಂಡು ಒಟ್ಟು-621 ಸರಬರಾಜಾಗಿರುತ್ತವೆ. ಇನ್ನೂ 04 ಒಲ್ವೋ, 25 ನಾನ್-ಎ.ಸಿ.ಸ್ಲೀಪರ, ಹಾಗೂ 02 ಎ.ಸಿ.ಸ್ಲೀಪರ್ ಬಸ್ಸುಗಳು ನಿಗಮಕ್ಕೆ ಸರಬರಾಜಾಗಬೇಕಾಗಿದ್ದು, ಕವಚ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿರುತ್ತದೆ.

ಶಕ್ತಿ ಯೋಜನೆ ಜಾರಿಗೂ ಮೊದಲು 22214 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು.

ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ 24744 ಸರತಿಗಳನ್ನು ಮಾಡಲಾಗುತ್ತಿದೆ. ಪ್ರತಿ ದಿನ 2530

| | | |
|---|---|---|
| | | ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>2023-24ನೇ ಸಾಲಿನಲ್ಲಿ 499 ಹೊಸ ಅನುಸೂಚಿಗಳನ್ನು ಕಾರ್ಯಾಚರಿಸಲು ಯೋಜಿಸಲಾಗಿದ್ದು, ಅದರಲ್ಲಿ 294 ಹೊಸ ಅನುಸೂಚಿಗಳನ್ನು ಪ್ರಾರಂಭಿಸಲಾಗಿದೆ. |
| ಇ. | ರಾಜ್ಯದ ಹಲವಾರು ಕಡೆಗಳಲ್ಲಿ ಬಸ್ಸುಗಳೇ ಇಲ್ಲವೆಂಬುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | **ಕ.ರಾ.ರ.ಸಾ.ನಿಗಮ:-**<br><br>ನಿಗಮದ ವ್ಯಾಪ್ತಿಯಲ್ಲಿ 17 ಜಿಲ್ಲೆಗಳು ಬರುತ್ತವೆ. ಸದರಿ ಕಾರ್ಯಾಚರಣೆ ವ್ಯಾಪ್ತಿಯಲ್ಲಿ ಒಟ್ಟು 7574 ಅನುಸೂಚಿಗಳಿಂದ 46954 ಟ್ರಿಪ್‌ಗಳ ಕಾರ್ಯಾಚರಣೆಯನ್ನು ಮಾಡಲಾಗುತ್ತಿದೆ. ನಿಗಮದ ವ್ಯಾಪ್ತಿಯಲ್ಲಿ ಒಟ್ಟು 21670 ಗ್ರಾಮಗಳು ಇದ್ದು, ಇದರಲ್ಲಿ 19531 ಗ್ರಾಮಗಳಿಗೆ ಸಾರಿಗೆ ಸೌಲಭ್ಯವನ್ನು ಒದಗಿಸಲಾಗಿರುತ್ತದೆ ಹಾಗೂ 2139 ಗ್ರಾಮಗಳ ಸಮೀಪದ ಗ್ರಾಮಗಳವರೆಗೆ ಸಾರಿಗೆ ಸೌಲಭ್ಯವನ್ನು ಒದಗಿಸಲಾಗಿರುತ್ತದೆ.<br><br>ನಿಗಮದಿಂದ ಸಾರಿಗೆ ಸೌಲಭ್ಯ ಕಲ್ಪಿಸದ ಹಳ್ಳಿಗಳ ಪೈಕಿ 2138 ಹಳ್ಳಿಗಳು ಈ ಹಿಂದೆ ಸಮಗ್ರ ಪ್ರದೇಶ ಯೋಜನೆಗೂ ಮುನ್ನ ಸಂಪೂರ್ಣವಾಗಿ ರಾಷ್ಟ್ರೀಕೃತ ವಲ್ಲದ ಖಾಸಗಿ ವಲಯದಲ್ಲಿ ಬರುತ್ತದೆ. ಈ ಗ್ರಾಮಗಳಿಗೆ ನಿಗಮದ ವತಿಯಿಂದ ಸಾರಿಗೆ ಸೌಲಭ್ಯ ಕಲ್ಪಿಸಲು ಸಂಬಂಧಿಸಿದ ಪ್ರಾದೇಶಿಕ ಸಾರಿಗೆ ಪ್ರಾಧಿಕಾರ ಮತ್ತು ರಾಜ್ಯ ಸಾರಿಗೆ ಪ್ರಾಧಿಕಾರದಲ್ಲಿ ಪರವಾನಿಗೆ ಕೋರಿ ಅರ್ಜಿಗಳನ್ನು ಸಮಗ್ರ ಪ್ರಾದೇಶಿಕ ಯೋಜನೆಯಡಿ ಸಲ್ಲಿಸಲಾಗಿದೆ. ಸದರಿ ಪರವಾನಿಗೆಗಳು ಮಂಜೂರಾತಿಯಾದ ನಂತರ ಹಂತ-ಹಂತವಾಗಿ ಸಾರಿಗೆಗಳನ್ನು ಆಚರಣೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಕಳೆದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ.<br><br>ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸಲು / ಜಿ.ಸಿ.ಸಿ ಆಧಾರದ ಮೇಲೆ ಕಾರ್ಯಾಚರಿಸಲು ಪ್ರಕ್ರಿಯೆ ಜಾರಿಯಲ್ಲಿರುತ್ತದೆ:<br><br>➢ ಸರ್ಕಾರದಿಂದ ನಿಗಮಕ್ಕೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.100.00 ಕೋಟಿಗಳ ಅನುದಾನದಲ್ಲಿ ಕರ್ನಾಟಕ ಸಾರಿಗೆ ಸಾಮಾನ್ಯ ಮಾದರಿಯ ಒಟ್ಟು 250 ಸಂಖ್ಯೆ ಹೊಸ ವಾಹನಗಳನ್ನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ |

ರೂ.6235.44 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.

- 25 ಹೊಸ ಸಾಮಾನ್ಯ ಕರ್ನಾಟಕ ಸಾರಿಗೆ ಮಾದರಿ ವಾಹನಗಳನ್ನು ಡಿಸೆಂಬರ್-23ರ ಅಂತ್ಯದೊಳಗೆ ಸೇರ್ಪಡೆಗೊಳಿಸಲು ಕ್ರಮ ಜರುಗಿಸಲಾಗಿದೆ.
- 100 ಹೊಸ ಸಾಮಾನ್ಯ ಬಸ್ಸುಗಳನ್ನು ಖರೀದಿಸಲು ಸರಬರಾಜು ಆದೇಶ ನೀಡಿದ್ದು, ಈ ಪೈಕಿ 90 ಬಸ್ಸುಗಳು ಸರಬರಾಜಾಗಿರುತ್ತದೆ.
- 200 ಹೊಸ ಸಾಮಾನ್ಯ ಬಸ್ಸುಗಳನ್ನು ಖರೀದಿಸಲು ಸರಬರಾಜು ಆದೇಶ ನೀಡಲಾಗಿದೆ.
- 40 ಪಲ್ಲಕ್ಕಿ ನಾನ್-ಎ.ಸಿ. ಸ್ಲೀಪರ್ ಬಸ್ಸುಗಳನ್ನು ಖರೀದಿಸಲಾಗಿದೆ.
- 04 ಎ.ಸಿ. ಮತ್ತು 04 ನಾನ್-ಎ.ಸಿ. ಸ್ಲೀಪರ್ ಬಸ್ಸುಗಳನ್ನು ಖರೀದಿಸಲಾಗಿದೆ.
- 300 ಸಂಖ್ಯೆ ವಿದ್ಯುತ್ ಚಾಲಿತ ವಾಹನಗಳನ್ನು ಜಿ.ಸಿ.ಸಿ ಆಧಾರದಲ್ಲಿ ಕಾರ್ಯಾಚರಣೆಗೊಳಿಸಲು ಕ್ರಮ ಜರುಗಿಸಲಾಗುತ್ತಿದ್ದು ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ.
- 350 ಸಂಖ್ಯೆ ಸಾಮಾನ್ಯ ಬಸ್ಸುಗಳನ್ನು ಖರೀದಿಸಲು ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ.

2023-24ನೇ ಸಾಲಿನಲ್ಲಿ ಇಲ್ಲಿಯವರೆಗೆ ಹೊಸ 90 ಸಂಖ್ಯೆ ಕರ್ನಾಟಕ ಸಾರಿಗೆ ಮಾದರಿ ವಾಹನಗಳನ್ನು ಹಾಗೂ 150 ಸಂಖ್ಯೆ ಟಾಟಾ ನಗರ ಸಾರಿಗೆ ಮಾದರಿ ವಾಹನಗಳನ್ನು ಬಿ.ಎಂ.ಟಿ.ಸಿ ಯಿಂದ ವರ್ಗಾಯಿಸಿಕೊಂಡು ಕ.ರಾ.ರ.ಸಾ.ನಿಗಮದ ವಿಭಾಗಗಳಿಗೆ ಒದಗಿಸಲಾಗಿದೆ.

ಮುಂದುವರೆದು, ನಿಗಮದ ವ್ಯಾಪ್ತಿಯಲ್ಲಿ ಬೇಡಿಕೆಗೆ ಅನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಕ್ರೂಢೀಕರಿಸಿಕೊಂಡು ಮಾರ್ಗ ಸಮೀಕ್ಷೆ ಕೈಗೊಂಡು ಪರಿಶೀಲಿಸಿ, ಸಾರಿಗೆ ಸೌಲಭ್ಯವನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ

**ಬೆಂ.ಮ.ಸಾ.ಸಂಸ್ಥೆ:-**

ಸಂಸ್ಥೆಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಿಂದ 25.0 ಕಿಮೀ.ವರೆಗೆ ಕಾರ್ಯಾಚರಣೆ ವ್ಯಾಪ್ತಿಯನ್ನು ಹೊಂದಿದ್ದು, ಈಗಾಗಲೇ ಸಂಸ್ಥೆಯ ಕಾರ್ಯಾಚರಣೆ ವ್ಯಾಪ್ತಿಗೆ ಒಳಪಡುವ ಹಾಗೂ ಬಸ್ಸುಗಳ ಸಂಚಾರಕ್ಕೆ ಸೂಕ್ತ ರಸ್ತೆಗಳಿರುವ ಎಲ್ಲಾ

ಪ್ರದೇಶಗಳಿಗೂ ಅವಶ್ಯಕತೆಗನುಗುಣವಾಗಿ ಸಾರಿಗೆ ಸೌಲಭ್ಯವನ್ನು ಒದಗಿಸುತ್ತಿದೆ.

ಸಾರ್ವಜನಿಕ ಪ್ರಯಾಣಿಕರ ಬೇಡಿಕೆ ಹಾಗೂ ಒತ್ತಡಕ್ಕನುಗುಣವಾಗಿ, ಮೂಲಭೂತ ಸೌಕರ್ಯಗಳ ಲಭ್ಯತೆಗನುಗುಣವಾಗಿ ಹೊಸ ಮಾರ್ಗಗಳನ್ನು ಪರಿಚಯಿಸುವುದು, ಹಾಲಿಯಿರುವ ಮಾರ್ಗಗಳಲ್ಲಿ ಸಾರಿಗೆಗಳನ್ನು ಹೆಚ್ಚಿಸುವುದು ಮತ್ತು ಪ್ರಯಾಣಿಕರ ಸಂಚಾರ ದಟ್ಟಣೆಗನುಗುಣವಾಗಿ ಸಾರಿಗೆಗಳನ್ನು ಪರಿಷ್ಕರಿಸಿ ಕಾರ್ಯಾಚರಣೆಗೊಳಿಸಲಾಗುತ್ತಿದೆ.

ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸಲು/ ಜಿ.ಸಿ.ಸಿ ಆಧಾರದ ಮೇಲೆ ಕಾರ್ಯಾಚರಿಸಲು ಪ್ರಕ್ರಿಯೆ ಜಾರಿಯಲ್ಲಿರುತ್ತದೆ:

- 840 ಬಿ.ಎಸ್-6 ಡೀಸೆಲ್ ಬಸ್
- 921 ಎಲೆಕ್ಟ್ರಿಕ್ ಬಸ್(ಜಿಸಿಸಿ)
- 100 ಫೀಡರ್ ಸರ್ವಿಸ್ (ಜಿಸಿಸಿ)
- 20 ಚಿಕ್ಕ ಬಸ್ (ಫೀಡರ್ ಸರ್ವಿಸ್)
- 05 ಡಬಲ್ ಡೆಕ್ಕರ್ ಬಸ್ ಹವಾನಿಯಂತ್ರಿತ (NCAP)
- 05 ಡಬಲ್ ಡೆಕ್ಕರ್ ಬಸ್ ಹವಾನಿಯಂತ್ರಿತ (DULT)
- ಸರ್ಕಾರದಿಂದ ಸಂಸ್ಥೆಗೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.150.00 ಕೋಟಿಗಳ ಅನುದಾನದಲ್ಲಿ 320 ಹವಾನಿಯಂತ್ರಿತ ಎಲೆಕ್ಟ್ರಿಕ್ ಬಸ್‌ಗಳನ್ನು ಕಾರ್ಯಾಚರಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ. 9353.16 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ

**ವಾ.ಕ.ರ.ಸಾ.ಸಂಸ್ಥೆ:-**

ಸಂಸ್ಥೆಯ 6 ಕಂದಾಯ ಜಿಲ್ಲೆಗಳ ವ್ಯಾಪ್ತಿಯಲ್ಲಿ ಒಟ್ಟು 4583 ಅನುಸೂಚಿಗಳಿಂದ 35790 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

ಸಂಸ್ಥೆಯ ವ್ಯಾಪ್ತಿಯಲ್ಲಿ ಒಟ್ಟು 4610 ಹಳ್ಳಿಗಳ ಪೈಕಿ 4565 ಹಳ್ಳಿಗಳಿಗೆ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ, ಇನ್ನುಳಿದ 45 ಗ್ರಾಮಗಳಿಗೆ ವಾಹನ ಸಂಚಾರ ಯೋಗ್ಯ ರಸ್ತೆ ಇರುವುದಿಲ್ಲ. ಆದಾಗ್ಯೂ ಸಹ

ಯೋಗ್ಯ ರಸ್ತೆ ಇರುವ ಹತ್ತಿರದ ಗ್ರಾಮಗಳವರೆಗೆ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ.

<u>ಕಳೆದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ.</u>

ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸಲು / ಜಿ.ಸಿ.ಸಿ ಆಧಾರದ ಮೇಲೆ ಕಾರ್ಯಾಚರಿಸಲು ಪ್ರಕ್ರಿಯೆ ಜಾರಿಯಲ್ಲಿರುತ್ತದೆ:

- 50 ಗ್ರಾಮಾಂತರ ಸಾರಿಗೆ ವಾಹನಗಳನ್ನು ಖರೀದಿಸಲಾಗಿದೆ.
- ಗ್ರಾಮಾಂತರ ಸಾರಿಗೆಯ 285 ಹೊಸ ವಾಹನಗಳ ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.
- 2023-24ನೇ ಸಾಲಿನ ಆಯವ್ಯಯದಲ್ಲಿ ರಾಜ್ಯ ಸರ್ಕಾರವು ಘೋಷಿಸಿದಂತೆ ರೂ.500.00 ಕೋಟಿ ಅನುದಾನದಡಿಯಲ್ಲಿ ವಾಕರಸಾಸಂಸ್ಥೆಗೆ ಹಂಚಿಕೆಯಾದ ರೂ.150.00 ಕೋಟಿಗಳ ಅನುದಾನದಿಂದ 375 ಗ್ರಾಮಾಂತರ ಸಾರಿಗೆ ಗ್ರಾಮಾಂತರ ಸಾರಿಗೆಗಳನ್ನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.9353.16 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.
- ಡಲ್ಟ್ ಆರ್ಥಿಕ ಸಹಾಯದಿಂದ 100 ನಗರ ಸಾರಿಗೆ ಬಸ್ಸುಗಳ ಖರೀದಿ ಪ್ರಕ್ರಿಯೆ ಸಹ ಜಾರಿಯಲ್ಲಿರುತ್ತದೆ.

20-ನಾನ್ ಎ/ಸಿ ಸ್ಲೀಪರ್ ಹಾಗೂ 04-ಎ/ಸಿ ಸ್ಲೀಪರ್ ವಾಹನಗಳ ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.

**ಕ.ಕ.ರ.ಸಾ.ನಿಗಮ:-**

ನಿಗಮದಲ್ಲಿ 9 ವಿಭಾಗಗಳಿದ್ದು, ಒಟ್ಟು 4854 ಬಸ್‌ಗಳು ಕಾರ್ಯಾಚರಣೆಯಲ್ಲಿರುತ್ತವೆ. ಸದರಿ ಬಸ್‌ಗಳಿಂದ ಒಟ್ಟು 4353 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು, ನಿಗಮದ ಯಾವುದೇ ಜಿಲ್ಲೆಗಳಲ್ಲಿಯೂ ಬಸ್‌ಗಳ ಕೊರತೆ ಇರುವುದಿಲ್ಲ.

ಕಳೆದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ.

ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ:

- ಸರ್ಕಾರದಿಂದ ನಿಗಮಕ್ಕೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.100.00 ಕೋಟಿಗಳ

<table>
<tr>
<td></td>
<td></td>
<td>ಅನುದಾನದಲ್ಲಿ ಪೂರ್ಣ ಕವಚ ನಿರ್ಮಿತ 250 ವೇಗದೂತ ಸಾರಿಗೆಗಳನ್ನು ಖರೀದಿಸಲು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.6235.44 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>➢ ಪೂರ್ಣ ಕವಚ ನಿರ್ಮಿತ 93 ನಗರ ಸಾರಿಗೆ ಬಸ್ಸುಗಳನ್ನು ಡಲ್ಟ್ ಆರ್ಥಿಕ ಸಹಾಯದಿಂದ ಖರೀದಿಸಲು ಮಂಜೂರಾತಿ ದೊರೆತಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.</td>
</tr>
<tr>
<td>ಈ.</td>
<td>ಕಳೆದ 5 ವರ್ಷದಲ್ಲಿ ಸಾರಿಗೆ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸಿಬ್ಬಂದಿಗಳ ಸಂಖ್ಯೆಯೆಷ್ಟು; ಪ್ರಸ್ತುತ ಎಷ್ಟು ಸಿಬ್ಬಂದಿಗಳ ಕಾರ್ಯ ನಿರ್ವಹಿಸುತ್ತಿದ್ದಾರೆ; ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಪೂರ್ಣ ವಿವರ ನೀಡುವುದು)</td>
<td>ಕ.ರಾ.ರ.ಸಾ.ನಿಗಮ:-<br>ಕಳೆದ 5 ವರ್ಷದಲ್ಲಿ ನಿಗಮದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಸಿಬ್ಬಂದಿಗಳ ಸಂಖ್ಯೆ ಕೆಳಕಂಡಂತಿದೆ:-
<table>
<tr><th>ಕ್ರ. ಸಂ.</th><th>ವರ್ಷ</th><th>ಸಂಖ್ಯೆ</th></tr>
<tr><td>1</td><td>2018-2019</td><td>38654</td></tr>
<tr><td>2</td><td>2019-2020</td><td>38012</td></tr>
<tr><td>3</td><td>2020-2021</td><td>36852</td></tr>
<tr><td>4</td><td>2021-2022</td><td>35331</td></tr>
<tr><td>5</td><td>2022-2023</td><td>34422</td></tr>
<tr><td></td><td>ಒಟ್ಟು</td><td>183271</td></tr>
</table>
ನಿಗಮದಲ್ಲಿ ಅಕ್ಟೋಬರ್-2023ರ ಅಂತ್ಯಕ್ಕೆ ಒಟ್ಟು 33670 ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ.<br><u>ಕಳೆದ 07 ವರ್ಷಗಳಲ್ಲಿ ಸಿಬ್ಬಂದಿ ನೇಮಕಾತಿ ಆಗಿರುವುದಿಲ್ಲ.</u><br>ಪ್ರಸಕ್ತ ಸಾಲಿನಲ್ಲಿ ನಿಗಮದಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ ಪ್ರಸ್ತುತ 2000 ಚಾಲಕ-ಕಂ-ನಿರ್ವಾಹಕ ಹುದ್ದೆ ಹಾಗೂ 300 ತಾಂತ್ರಿಕ ಸಹಾಯಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ. ತಾತ್ಕಾಲಿಕ ಹೊರಗುತ್ತಿಗೆ ಆಧಾರದ ಮೇಲೆ ಚಾಲಕರನ್ನು ನೇಮಿಸಿಕೊಳ್ಳಲಾಗುತ್ತಿದೆ.<br>ಬೆಂ.ಮ.ಸಾ.ಸಂಸ್ಥೆ:-<br>ಸಂಸ್ಥೆಯಲ್ಲಿ ಕಳೆದ 5 ವರ್ಷದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಸಿಬ್ಬಂದಿ ವಿವರಗಳು ಈ ಕೆಳಕಂಡಂತಿವೆ:
<table>
<tr><th>ವರ್ಷ</th><th>ಕಾರ್ಯನಿರ್ವಹಣೆ</th></tr>
<tr><td>2018-2019</td><td>33878</td></tr>
<tr><td>2019-2020</td><td>33292</td></tr>
<tr><td>2020-2021</td><td>32308</td></tr>
<tr><td>2021-2022</td><td>30153</td></tr>
</table>
</td>
</tr>
</table>

| | |
|---|---|
| 2022-2023 | 29457 |
| ಒಟ್ಟು | **159088** |

ಸಂಸ್ಥೆಯಲ್ಲಿ ಅಕ್ಟೋಬರ್-2023ರ ಅಂತ್ಯಕ್ಕೆ ಒಟ್ಟು 28795 ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ.

ಕಳೆದ 05 ವರ್ಷಗಳಲ್ಲಿ ಸಿಬ್ಬಂದಿ ನೇಮಕಾತಿ ಆಗಿರುವುದಿಲ್ಲ.

ಸಂಸ್ಥೆಯಲ್ಲಿ 2023-24ನೇ ಸಾಲಿನ ಕಾರ್ಯಯೋಜನೆಯನ್ವಯ ಪ್ರಸ್ತುತ 2500 ನಿರ್ವಾಹಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಜಾಹೀರಾತು ಹೊರಡಿಸುವ ಕಾರ್ಯವು ಪ್ರಗತಿಯಲ್ಲಿರುತ್ತದೆ. ಅಲ್ಲದೇ, ಸಂಸ್ಥೆಯಲ್ಲಿ 371-ಜೆ ಕಲ್ಯಾಣ-ಕರ್ನಾಟಕ ಭಾಗದ ಹಿಂಬಾಕಿಯಾಗಿರುವ (ಗ್ರೂಪ್-ಸಿ) ಹುದ್ದೆಗಳಾದ-ಸಹಾಯಕ ಲೆಕ್ಕಿಗ, ಸ್ಟಾಫ್‌ನರ್ಸ್, ಫಾರ್ಮಸಿಸ್ಟ್ ಒಟ್ಟು 03 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅಧಿಸೂಚನೆ ಹೊರಡಿಸುವ ಕಾರ್ಯವು ಪ್ರಗತಿಯಲ್ಲಿರುತ್ತದೆ.

**ವಾ.ಕ.ರ.ಸಾ.ಸಂಸ್ಥೆ:-**

ಸಂಸ್ಥೆಯಲ್ಲಿ ಕಳೆದ 05 ವರ್ಷದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಮತ್ತು ಪ್ರಸ್ತುತ ಅಕ್ಟೋಬರ್-2023 ರ ಅಂತ್ಯಕ್ಕೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಈ ಕೆಳಕಂಡಂತಿರುತ್ತದೆ.

| ಕ್ರ. ಸಂ. | ವರ್ಷ | ಸಿಬ್ಬಂದಿಗಳ ಸಂಖ್ಯೆ |
|---|---|---|
| 1 | 2018-2019 | 23423 |
| 2 | 2019-2020 | 23232 |
| 3 | 2020-2021 | 22468 |
| 4 | 2021-2022 | 21953 |
| 5 | 2022-2023 | 21528 |
| | ಒಟ್ಟು | **112604** |

ಸಂಸ್ಥೆಯಲ್ಲಿ ಅಕ್ಟೋಬರ್-2023ರ ಅಂತ್ಯಕ್ಕೆ ಒಟ್ಟು 21059 ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ.

ಕಳೆದ 07 ವರ್ಷಗಳಲ್ಲಿ ಸಿಬ್ಬಂದಿ ನೇಮಕಾತಿ ಆಗಿರುವುದಿಲ್ಲ.

ಸಂಸ್ಥೆಯಲ್ಲಿ ಒಟ್ಟು 2000 ಚಾಲಕ-ಕಂ-ನಿರ್ವಾಹಕ ಹುದ್ದೆಗಳ ನೇರ ನೇಮಕಾತಿಯ ಪ್ರಕ್ರಿಯೆ ಜಾರಿಯಲ್ಲಿರುತ್ತದೆ ಹಾಗೂ 45 ಅಧಿಕಾರಿಗಳು, 97 ಮೇಲ್ವಿಚಾರಕರು, 28 ಸಹಾಯಕ ಸಂಚಾರ

<table>
<tr>
<td></td>
<td></td>
<td>
ವ್ಯವಸ್ಥಾಪಕರು, 80 ಕುಶಲಕರ್ಮಿ, 500 ತಾಂತ್ರಿಕ ಸಹಾಯಕರುಗಳನ್ನು ನೇರ ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ.
ಕ.ಕ.ರ.ಸಾ.ನಿಗಮ:-
<table>
<tr><th>ಕ್ರ.<br>ಸಂ.</th><th>ವರ್ಷ</th><th>ಕಾರ್ಯ<br>ನಿರ್ವಹಣೆ</th></tr>
<tr><td>1.</td><td>2018-19</td><td>20574</td></tr>
<tr><td>2.</td><td>2019-20</td><td>20376</td></tr>
<tr><td>3.</td><td>2020-21</td><td>19629</td></tr>
<tr><td>4.</td><td>2021-22</td><td>19319</td></tr>
<tr><td>5.</td><td>2022-23</td><td>18803</td></tr>
<tr><td colspan="2">ಒಟ್ಟು</td><td>98701</td></tr>
</table>
ನಿಗಮದಲ್ಲಿ ಅಕ್ಟೋಬರ್-2023ರ ಅಂತ್ಯಕ್ಕೆ ಒಟ್ಟು 18440 ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ.
ಕಳೆದ 07 ವರ್ಷಗಳಲ್ಲಿ ಸಿಬ್ಬಂದಿ ನೇಮಕಾತಿ ಆಗಿರುವುದಿಲ್ಲ.
ಪ್ರಸಕ್ತ ಸಾಲಿನಲ್ಲಿ ನಿಗಮದಲ್ಲಿ 925-ಚಾಲಕ ಹುದ್ದೆ ಮತ್ತು 694-ಚಾಲಕ-ಕಂ-ನಿರ್ವಾಹಕ ಹುದ್ದೆಗಳ ಸೇರಿದಂತೆ 16-ಸಹಾಯಕ ಲೆಕ್ಕಿಗ ಮತ್ತು 300-ನಿರ್ವಾಹಕ ಹುದ್ದೆಗಳನ್ನು ನೇರ ನೇಮಕಾತಿ ಮತ್ತು 59 ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಭರ್ತಿ ಮಾಡಿಕೊಳ್ಳುವ ಪ್ರಕ್ರಿಯೆ ಜಾರಿಯಲ್ಲಿದ್ದು, ಜನವರಿ 2024ರ ಒಳಗಾಗಿ ನೇಮಕಾತಿ ಪ್ರಕ್ರಿಯೆಗಳನ್ನು ಮುಕ್ತಾಯಗೊಳಿಸಿ, ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ಕ್ರಮ ವಹಿಸಲಾಗುವುದು.
15-ಸಹಾಯಕ ಲೆಕ್ಕಿಗ ಮತ್ತು 300-ನಿರ್ವಾಹಕ ಹುದ್ದೆಗಳನ್ನು ನೇರ ನೇಮಕಾತಿ ಮತ್ತು 59 ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಭರ್ತಿ ಮಾಡಿಕೊಳ್ಳುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.
ಮುಂದುವರೆದು, ಬಾಕಿ ಇದ್ದ 36 ಹಿಂಬಾಕಿ ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆಯನ್ನು ಹೊರಡಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.
</td>
</tr>
<tr>
<td>ಉ.</td>
<td>ಶಕ್ತಿ ಯೋಜನೆಯ ಆದೇಶದಲ್ಲಿ ನೀಡಿರುವಂತೆ ಬಸ್ಸುಗಳಲ್ಲಿ</td>
<td>ಕ.ರಾ.ರ.ಸಾ.ನಿಗಮ, ವಾ.ಕ.ರ.ಸಾ.ನಿಗಮ ಮತ್ತು ಕ.ಕ.ರ.ಸಾ.ನಿಗಮ:-</td>
</tr>
</table>

| | | |
|---|---|---|
| | ಪುರುಷ ಮತ್ತು ಮಹಿಳೆಯರಿಗೆ 50:50 ರಂತೆ ಸೀಟುಗಳನ್ನು ಮೀಸಲಿಟ್ಟಿದ್ದರೂ ಬಹುತೇಕ ಬಸ್ಸುಗಳಲ್ಲಿ ಈ ನಿಯಮ ಪಾಲನೆಯಾಗುತ್ತಿಲ್ಲದಿರುವುದರಿಂದ ಪುರುಷ ಪ್ರಯಾಣಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? | ಶಕ್ತಿ ಯೋಜನೆಯ ಆದೇಶದಲ್ಲಿ ನೀಡಿರುವಂತೆ ಬಸ್ಸುಗಳಲ್ಲಿ ಪುರುಷ ಮತ್ತು ಮಹಿಳೆಯರಿಗೆ 50:50ರಂತೆ ಸೀಟುಗಳನ್ನು ಮೀಸಲಿಡುವುದರಿಂದ ಗೊಂದಲ/ತೊಂದರೆ ಉಂಟಾಗುವ ಸಾಧ್ಯತೆ ಇರುವುದರಿಂದ ಹಾಗೂ ಶಕ್ತಿ ಯೋಜನೆಯನ್ನು ಪರಿಪೂರ್ಣವಾಗಿ ಅನುಷ್ಠಾನಗೊಳಿಸುವ ಉದ್ದೇಶದಿಂದ ಸದರಿ ಷರತ್ತನ್ನು ಅನುಷ್ಠಾನಗೊಳಿಸುವುದು ಕಷ್ಟಸಾಧ್ಯವಾಗಿರುತ್ತದೆ.<br><br>ಮುಂಗಡ ಆಸನ ಕಾಯ್ದಿರಿಸುವ (Advance Booking) ವ್ಯವಸ್ಥೆ ಇರುವ ಸಾರಿಗೆಗಳಿಗೆ ಮಾತ್ರ ಪ್ರಾರಂಭದ ಸ್ಥಳದಲ್ಲಿ ಶೇ.50ರಷ್ಟು ಆಸನಗಳನ್ನು ಪುರುಷರಿಗೆ ಕಾಯ್ದಿರಿಸಲು ಅಗತ್ಯ ಕ್ರಮವಹಿಸಲಾಗಿದೆ.<br><br>ಸಂಚಾರ ದಟ್ಟಣೆ/ಬೇಡಿಕೆಗೆ ಅನುಗುಣವಾಗಿ ಹೆಚ್ಚುವರಿ ಸರತಿಗಳನ್ನು ಅಳವಡಿಸಿ ಆಚರಣೆ ಮಾಡಲಾಗುತ್ತಿದೆ. |

ಸಂಖ್ಯೆ: ಟಿಡಿ 219 ಟಿಸಿಕ್ಯೂ 2023

(ರಾಮಲಿಂಗಾ ರೆಡ್ಡಿ)

ಸಾರಿಗೆ ಮತ್ತು ಮುಜರಾಯಿ ಸಚಿವರು